# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 553 (751)
ಸದಸ್ಯರ ಹೆಸರು : ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 26-12-2022
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2006ರವರೆಗೆ ರಾಜ್ಯದಲ್ಲಿ ಅನುದಾನಿತ ಪದವಿ ಪೂರ್ವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು ; | 2006ರವರೆಗೆ ರಾಜ್ಯದಲ್ಲಿ ಅನುದಾನಿತ ಪದವಿ ಪೂರ್ವ ಶಾಲಾ ಕಾಲೇಜುಗಳ ಸಂಖ್ಯೆ: 526 |
| ಆ) | 2006ರ ನಂತರ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; | 2006ರ ನಂತರ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ: 298 |
| ಇ) | ದಿನಾಂಕ: 01-04-2006ರ ನಂತರ ಅನುದಾನಿತ ಶಾಲಾ ಕಾಲೇಜುಗಳಾಗಿ ಪರಿಗಣಿಸಲ್ಪಟ್ಟ ಸಂಸ್ಥೆಗಳಲ್ಲಿ ದಿನಾಂಕ: 01-04-2006ರ ಹಿಂದೆಯೇ ಸೇವೆ ಸಲ್ಲಿಸುತ್ತಿರುವ (ನಿಧನರಾಗಿರುವ ಹಾಗೂ ನಿವೃತ್ತರಾಗಿರುವ ಸಿಬ್ಬಂದಿಗಳು ಸೇರಿ) ಸಿಬ್ಬಂದಿಗಳಿಗೆ ಹಳೆಯ ಪಿಂಚಣಿ ಯೋಜನೆ ಜಾರಿಗೆ ತೆರಲಾಗಿದೆಯೇ; | ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನ ಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ 2006ರ ಪೂರ್ವದಲ್ಲಿ ಅನುದಾನ ರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ:01/04/2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಡುತ್ತಾರೆ.<br><br>ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ:FD (SPL)04 PET 2005, ದಿನಾಂಕ:31/03/2006ರ ಕ್ರಮ ಸಂಖ್ಯೆ :08ರಲ್ಲಿ ಈ ಕೆಳಗಿನಂತೆ ತಿಳಿಸಲಾಗಿದೆ.<br><br>"ಸಹಾಯಾನುದಾನ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಗೊತ್ತು ಮಾಡಿದ ಪ್ರಯೋಜನೆ ಪಿಂಚಣಿಯನ್ನು ದಿನಾಂಕ:01/04/2006 ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿ ಬಿಡತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು ಆಯ್ಕೆಯ ಅವಕಾಶದ ಆಧಾರದ ಮೇಲೆ ನೌಕರನಿಗೆ ಮತ್ತು ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಆಯ್ಕೆ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕುದು. ಆದರೆ, ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕುದು. ಆದರೆ ರಾಜ್ಯ ಸರ್ಕಾರವಲ್ಲ."<br><br>ಈ ಆದೇಶವು ದಿನಾಂಕ: 01-04-2006ರಿಂದ ಜಾರಿಗೆ ಬಂದಿದ್ದು, ದಿನಾಂಕ: 01-04-2006ರ ನಂತರ ಅನುದಾನ ಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ. |
| ಈ) | ಇಲ್ಲದಿದ್ದಲ್ಲಿ, ಈ ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗುವುದು? | |

ಸಂಖ್ಯೆ: ಇಪಿ 287 ಡಿಜಿಡಬ್ಲ್ಯೂ 2022

(ಬಿ.ಸಿ. ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು